# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 744 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.03.2026 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಕೆಲವು ಗ್ರಾಮ ಪಂಚಾಯತ್ ಗಳಲ್ಲಿ ಪೌರ ಕಾರ್ಮಿಕರ ಬದಲಾಗಿ ಸ್ವಸಹಾಯ ಸಂಘಗಳ ಮಹಿಳೆಯರನ್ನು ಬಳಸಿಕೊಂಡು, ಯಾವುದೇ ರಕ್ಷಣಾ ಕವಚಗಳಿಲ್ಲದೆ ಬರಿಗೈಲಿ ಹಸಿ ಮತ್ತು ಒಣ ಕಸ ವಿಂಗಡಿಸುವ ಅಮಾನವೀಯ ಕೆಲಸ ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆಲವು ಗ್ರಾಮ ಪಂಚಾಯತ್‌ಗಳಲ್ಲಿ ಪೌರ ಕಾರ್ಮಿಕರ ಬದಲಾಗಿ ಸ್ವಸಹಾಯ ಸಂಘಗಳ ಮಹಿಳೆಯರನ್ನು ಬಳಸಿಕೊಂಡು, ಯಾವುದೇ ರಕ್ಷಣಾ ಕವಚಗಳಿಲ್ಲದೆ ಬರಿಗೈಲಿ ಹಸಿ ಮತ್ತು ಒಣ ಕಸ ವಿಂಗಡಿಸುವ ಅಮಾನವೀಯ ಕೆಲಸ ಮಾಡಿಸುತ್ತಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ. |
| (ಆ) | ನಿಯಮದ ಪ್ರಕಾರ ಕಸ ವಿಂಗಡಣೆಗೆ ಯಂತ್ರಗಳನ್ನು ಬಳಸಬೇಕಿದ್ದರೂ, ಮಹಿಳೆಯರಿಂದ ಕೈಯಲ್ಲೇ ಮಾಡಿಸುತ್ತಿರುವುದು ಕಾನೂನು ಬಾಹಿರವಲ್ಲವೇ; ಈ ರೀತಿ ಮಾಡುತ್ತಿರುವ ಪಂಚಾಯತ್‌ಗಳ ವಿರುದ್ಧ ಕೈಗೊಂಡಿರುವ ಶಿಸ್ತು ಕ್ರಮಗಳೇನು; | ಘನ ತ್ಯಾಜ್ಯ ನಿರ್ವಹಣಾ ನಿಯಮಗಳು, 2016 ರನ್ವಯ ಕ್ರಮ ವಹಿಸಲಾಗುತ್ತಿದೆ. |
| (ಇ) | ಈ ಮಹಿಳೆಯರಿಗೆ ಕನಿಷ್ಠ ವೇತನ, ಆರೋಗ್ಯ ವಿಮೆ ಮತ್ತು ಸುರಕ್ಷತಾ ಉಪಕರಣಗಳನ್ನು ನೀಡದಿರಲು ಕಾರಣಗಳೇನು; | ಘನ ತ್ಯಾಜ್ಯ ನಿರ್ವಹಣೆಯನ್ನು ಕಿರು ಉದ್ಯಮವಾಗಿ ಕೈಗೊಂಡು ಸ್ವ-ಸಹಾಯ ಸಂಘದ ಮಹಿಳೆಯರನ್ನು ಆರ್ಥಿಕವಾಗಿ ಸುಸ್ಥಿರಗೊಳಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿಗಳು, ಸರ್ಕಾರದ ಸುತ್ತೋಲೆ ಸಂಖ್ಯೆ: ಕಪಂರಾಇ /ಅಭಿವೃದ್ಧಿ/ 308/ 2022 ದಿನಾಂಕ:18.07.2022 ರಲ್ಲಿ ತಿಳಿಸಿರುವಂತೆ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ(GPLF) ದೊಂದಿಗೆ ಒಪ್ಪಂದ ಮಾಡಿಕೊಂಡು ಒಕ್ಕೂಟದ ಮಹಿಳಾ ಸ್ವ-ಸಹಾಯ ಸಂಘಗಳ ಮೂಲಕ ಘನ ತ್ಯಾಜ್ಯ ನಿರ್ವಹಣೆಯನ್ನು ಮಾಡಲಾಗುತ್ತಿದೆ. ಸದರಿ ಕಿರು ಉದ್ಯಮಕ್ಕೆ ತಗಲುವ ವೆಚ್ಚವನ್ನು ಸಂಗ್ರಹಿಸಲಾಗುವ ಬಳಕೆದಾರರ ಶುಲ್ಕದಲ್ಲಿ ಸ್ವಚ್ಛತಾ ವಾಹಿನಿ ವಾಹನ ಚಾಲಕಿಯರಿಗೆ ಹಾಗೂ ಸಹಾಯಕಿಯರಿಗೆ GPLF ವತಿಯಿಂದ ಗೌರವ ಧನ ಪಾವತಿಸಲು ಸೂಚಿಸಲಾಗಿದೆ . ವಿಮೆ (PMJJBY & PMSBY) ಹಾಗೂ ಘನ ತ್ಯಾಜ್ಯ ನಿರ್ವಹಣೆಗಾಗಿ ಸಿಬ್ಬಂದಿಗಳಿಗೆ ಸುರಕ್ಷತಾ ಪರಿಕರಗಳಾದ Gloves, Gum Boots ಮತ್ತು Cap, Mask ಗಳನ್ನು ಒದಗಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 332 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.